ಸೆಪ್ಟೆಂಬರ್
2023

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ
ವಾರ್ತಾಪತ್ರ



01

## ಕರ್ನಾಟಕ ಸರ್ಕಾರದ ಮಾನ್ಯ ಮುಖ್ಯ ಕಾರ್ಯದರ್ಶಿಯವರಿಂದ ಸ್ವಚ್ಛತೆಯೇ ಸೇವೆ ಅಭಿಯಾನ ಸಭೆ

ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 2 ರ ವರೆಗೆ "ಸ್ವಚ್ಛತೆಯೇ ಸೇವೆ" ಅಭಿಯಾನವನ್ನು ರಾಜ್ಯದಲ್ಲಿ ಕೈಗೊಳ್ಳಲು ಮಾನ್ಯ ಮುಖ್ಯ ಕಾರ್ಯದರ್ಶಿ ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ರಾಜ್ಯದ ವಿವಿಧ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳ, ಪ್ರಧಾನ ಕಾರ್ಯದರ್ಶಿಗಳ ಮತ್ತು ಇತರ ಹಿರಿಯ ಅಧಿಕಾರಿಗಳ ಸಭೆ ವಿಧಾನ ಸೌಧದಲ್ಲಿ ನಡೆಯಿತು.

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ ಅವರಿಂದ ಸ್ವಚ್ಛತೆಯೇ ಸೇವೆ ಅಭಿಯಾನಕ್ಕೆ ಚಾಲನೆ

02




ಶ್ರೀ ಅಂಜುಮ್ ಪರ್ವೇಝ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅವರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯದರ್ಶಿಗಳೊಂದಿಗೆ ವೀಡಿಯೋ ಸಂವಾದ ನಡೆಸಿ ಸ್ವಚ್ಛತೆಯ ಪ್ರತಿಜ್ಞೆ ಬೋಧಿಸುವ ಮೂಲಕ 'ಸ್ವಚ್ಛತೆಯೇ ಸೇವೆ' ಆಂದೋಲನಕ್ಕೆ ಚಾಲನೆ ನೀಡಿ, ಅಭಿಯಾನವನ್ನು ಯಶಸ್ವಿಗೊಳಿಸುವಂತೆ ಸೂಚನೆ ನೀಡಿದರು. ಈ ವೇಳೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಇಲಾಖೆಯ ನಿರ್ದೇಶಕರಾದ ಶ್ರೀ ನಾಗೇಂದ್ರ ಪ್ರಸಾದ್ ಕೆ, ಅವರು ಉಪಸ್ಥಿತರಿದ್ದರು.



03

## ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ನಿರ್ದೇಶಕರಿಂದ ಕಲಬುರಗಿ ವೃತ್ತದ ಎಸ್.ಬಿ.ಎಂ(ಜಿ) ಮತ್ತು ಜೆ.ಜೆ.ಎಂ ಪ್ರಗತಿ ಪರಿಶೀಲನಾ ಸಭೆ

ಶ್ರೀ ನಾಗೇಂದ್ರ ಪ್ರಸಾದ್ ಕೆ. IAS, ನಿರ್ದೇಶಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಶ್ರೀ. ಎಜಾಜ್ ಹುಸೇನ್, ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಇವರು ಕಲಬುರಗಿ ವೃತ್ತದ ಜಿಲ್ಲೆಗಳ SE, EE ಗಳು, AEE ಗಳು, #SBMG ನೋಡಲ್ ಅಧಿಕಾರಿಗಳ ಜೊತೆ ಜೆ.ಜೆ.ಎಂ ಮತ್ತು ಎಸ್.ಬಿ.ಎಂ.ಜಿ ಪ್ರಗತಿ ಪರಿಶೀಲನೆ ಸಭೆ ನಡೆಸಿದರು.

## ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ನಿರ್ದೇಶಕರಿಂದ ದಕ್ಷಿಣ ಕನ್ನಡ ಜಿಲ್ಲೆ ಎಸ್.ಬಿ.ಎಂ(ಜಿ) ಮತ್ತು ಜೆ.ಜೆ.ಎಂ ಪ್ರಗತಿ ಪರಿಶೀಲನಾ ಸಭೆ

04



ಈ ವೇಳೆ "ಸ್ವಚ್ಛ ಸರ್ವೇಕ್ಷಣ ಗ್ರಾಮೀಣ– 2023"ರಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಗ್ರಾಮ ಪಂಚಾಯಿತಿಯವರಿಗೆ ಅಭಿನಂದನಾ ಪತ್ರ ನೀಡಿದರು. ಈ ಸಂದರ್ಭದಲ್ಲಿ #SBMG ನೋಡಲ್ ಅಧಿಕಾರಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, EE, AEE ಗಳು ಉಪಸ್ಥಿತರಿದ್ದರು.

ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಪಟ್ಟ ಸಮಸ್ಯೆಗಳಿದ್ದಲ್ಲಿ ಕರೆ ಮಾಡಿ: 9480985555